# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 285(334)
2) ಸದಸ್ಯರ ಹೆಸರು : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)
3) ಉತ್ತರಿಸುವ ದಿನಾಂಕ : 12.12.2018.
4) ಉತ್ತರಿಸುವವರು : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕೃಷ್ಣಾ ಮೇಲ್ದಂಡೆ ಯೋಜನೆಯಿಂದ ಬಾಗಲಕೋಟೆ ಜಿಲ್ಲೆಯ ಬೀಳಗಿ ತಾಲ್ಲೂಕಿನ "ಚಿಕ್ಕಸಂಗಮ" ಸ್ಥಳವು ನಡುಗಡ್ಡೆಯಾಗಿ ಮಾರ್ಪಟ್ಟಿದ್ದು ಇಲ್ಲಿ "ಪಕ್ಷಿಧಾಮ" ವನ್ನು ನಿರ್ಮಿಸಬೇಕೆನ್ನುವ ಬೇಡಿಕೆಯು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| (ಆ) | ಹಾಗಿದ್ದಲ್ಲಿ, ಅದಕ್ಕೆ ಪೂರಕವಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಬೀಳಗಿ ವಲಯ ವ್ಯಾಪ್ತಿಯ ಚಿಕ್ಕಸಂಗಮ ಪ್ರದೇಶದಲ್ಲಿ ವಲಸೆ ಬರುವ ಪಕ್ಷಿಗಳ ಸಂರಕ್ಷಣೆಗಾಗಿ ಈಗಾಗಲೇ ಅಧಿಸೂಚನೆಗೊಂಡಿರುವ "ಯಡಹಳ್ಳಿ ಚಿಂಕಾರ ವನ್ಯಜೀವಿಧಾಮ"ದ ನಿರ್ವಹಣಾ ಯೋಜನೆಯಡಿಯಲ್ಲಿ ಸಂರಕ್ಷಣಾ ಕ್ರಮಗಳನ್ನು ಅಳವಡಿಸಿಕೊಳ್ಳಲಾಗಿದೆ. ಪ್ರಸ್ತುತ ಋತುಗಳಲ್ಲಿ ಕಾವಲುಗಾರರನ್ನು ನೇಮಿಸಿ ಪಕ್ಷಿಗಳನ್ನು ಸಂರಕ್ಷಿಸಲು ಕ್ರಮ ಕೈಗೊಳ್ಳಲಾಗಿದೆ. |
| (ಇ) | ಇಲ್ಲವಾದಲ್ಲಿ, ಸದರಿ ಸ್ಥಳದಲ್ಲಿ "ಪಕ್ಷಿಧಾಮ" ನಿರ್ಮಿಸಲು ಇರುವ ಅಡಚಣೆಗಳೇನು; | ಅನ್ವಯಿಸುವುದಿಲ್ಲ. |
| (ಈ) | ಪ್ರಸಕ್ತ ಸಾಲಿನಲ್ಲಾದರೂ "ಪಕ್ಷಿಧಾಮ" ನಿರ್ಮಿಸಲು ಕ್ರಮ ಕೈಗೊಳ್ಳುವುದೇ; ಹಾಗಿದ್ದಲ್ಲಿ ಯಾವ ಕಾಲಮಿತಿಯಲ್ಲಿ ಈ ಯೋಜನೆಯನ್ನು ಪೂರ್ಣಗೊಳಿಸಲಾಗುವುದು? | ಪ್ರಸಕ್ತ ಸಾಲಿನಲ್ಲಿ ಋತುಮಾನಕ್ಕೆ ತಕ್ಕಂತೆ ವಲಸೆ ಬರುವ ಪಕ್ಷಿಗಳ ಬಗ್ಗೆ ಅಧ್ಯಯನ ನಡೆಸಲು ಕ್ರಮ ಕೈಗೊಳ್ಳಲಾಗಿರುತ್ತದೆ. ಅಧ್ಯಯನದ ವರದಿಯನ್ನು ಸ್ವೀಕರಿಸಿದ ನಂತರ ಚಿಕ್ಕಸಂಗಮ ಪ್ರದೇಶವನ್ನು ವನ್ಯಜೀವಿ (ಸಂರಕ್ಷಣಾ) ಕಾಯ್ದೆ, 1972ರ ಪ್ರಕಾರ "ಪಕ್ಷಿಧಾಮ" ವೆಂದು ಘೋಷಣೆ ಮಾಡಲು ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: ಅಪಜೀ 176 ಎಫ್‌ಡಬ್ಲ್ಯೂಎಲ್ 2018

(ಆರ್. ಶಂಕರ್)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು